ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :	211 (258)
ಸದಸ್ಯರ ಹೆಸರು :	ಶ್ರೀ ಕೆ. ಪ್ರತಾಪ ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ :	14-09-2021
ಉತ್ತರಿಸುವವರು :	ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಸಚಿವರು.

*****

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಕುಂದಾಪುರ ತಾಲ್ಲೂಕಿನ ಗ್ರಾಮೀಣ ಭಾಗದ ಜನರು ತಮ್ಮ ವೈದ್ಯಕೀಯ ಶಿಕ್ಷಣ, ವ್ಯಾಪಾರ, ಬ್ಯಾಂಕಿಂಗ್ ಮತ್ತಿತ್ತರ ಕಾರಣಗಳಿಂದ ಕುಂದಾಪುರ ಪೇಟೆಯನ್ನು ಆಶ್ರಯಿಸಿರುವುದರಿಂದ ಪುರಸಭಾ ವ್ಯಾಪ್ತಿಯಲ್ಲಿ ಪಾರ್ಕಿಂಗ್ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕುಂದಾಪುರದ ಹೃದಯ ಭಾಗದಲ್ಲಿ ಬಹುಮಹಡಿ ಪಾರ್ಕಿಂಗ್ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಸರ್ಕಾರವು ಚಿಂತನೆಯನ್ನು ಹೊಂದಿದೆಯೇ;	ಹೌದು. ಕುಂದಾಪುರ ಪುರಸಭಾ ವ್ಯಾಪ್ತಿಯಲ್ಲಿ ವಾಹನ ದಟ್ಟಣೆಯಿಂದಾಗಿ ಪಾರ್ಕಿಂಗ್ ತೊಂದರೆಯಾಗುತ್ತಿರುವುದನ್ನು ಪುರಸಭೆಯು ಗಮನಿಸಿ ಪೊಲೀಸ್ ಇಲಾಖೆಯು(ಟ್ರಾಫಿಕ್) ಸಹಕಾರದೊಂದಿಗೆ ನಗರದ ಆಯ್ದ ಭಾಗಗಳಲ್ಲಿ ವಾಹನ ನಿಲುಗಡೆ ಸ್ಥಳ ಗುರುತಿಸುವುದು, ಸುಗಮ ಸಂಚಾರಕ್ಕೆ ಏಕಮುಖ ರಸ್ತೆಗೆ ಕ್ರಮ ಕೈಗೊಳ್ಳುವುದು ಮುಂತಾದ , ಕಾರ್ಯಗಳನ್ನು ಹಮ್ಮಿಕೊಂಡಿದೆ ಹಾಗೂ ಕುಂದಾಪುರದ ಹೃದಯ ಭಾಗದಲ್ಲಿ ಬಹುಮಹಡಿ ಪಾರ್ಕಿಂಗ್ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಯಾವುದೇ ಚಿಂತನೆಯನ್ನು ಹೊಂದಿರುವುದಿಲ್ಲ.
(ಆ)	ಕುಂದಾಪುರ ಪೇಟೆ ಭಾಗದಲ್ಲಿ ವಾಹನ ದಟ್ಟಣೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಕುಂದಾಪುರದ ಹೊರ ವೃತ್ತದಲ್ಲಿ ರಿಂಗ್‌ರೋಡ್ ನಿರ್ಮಾಣದ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ; ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?	ಅಂತಹ ಯಾವುದೇ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ.

ಸಂಖ್ಯೆ: ನಅಇ 162 ಜಿಇಎಲ್ 2021(ಇ)

(ಸಹಿ)
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಸಚಿವರು